**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ ಬೆಂಗಳೂರು-560 001**

ಸಂಖ್ಯೆ: ಸಿ4[6]ಸಾ.ಸ್ಥ.ಧೂ.ನಿ.36/2008-09 ದಿ:22.06.2017

**:ಸುತ್ತೋಲೆ:**

ವಿಷಯ: ಮಾದಕ ವಸ್ತುಗಳ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸುವ ಕುರಿತು.ರಾಜ್ಯದಲ್ಲಿ ದಿನಾಂಕ:26.06.2017ನ್ನು ಅಂತರರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ವಿರೋಧಿ ದಿನಾಚರಣೆಯನ್ನಾಗಿ ಆಚರಿಸುವ ಕುರಿತು.

ಉಲ್ಲೇಖ: ಅರೆ ಸರ್ಕಾರಿ ಪತ್ರ ಸಂಖ್ಯೆ:ಅ.ಸ.ಪತ್ರ ಸಂಖ್ಯೆ:ಒಇ 45 ಪಿಎನ್‌ಡಿ 2016 ದಿನಾಂಕ:20/06/2017

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಸೂಚಿಸಿರುವಂತೆ ಮಾದಕ ವಸ್ತುಗಳ ಬಳಕೆ ಹಾಗೂ ಮಾರಾಟವನ್ನು ತಡೆಗಟ್ಟಲು ರಾಜ್ಯ ಸರ್ಕಾರದಿಂದ ಹಲವು ಕ್ರಮಗಳನ್ನು ಹಮ್ಮಿಕೊಂಡಿರುವುದಕ್ಕೆ ಸಂಬಂಧಿಸಿದಂತೆ ದಿನಾಂಕ:26/06/2017ನ್ನು ಅಂತರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ವಿರೋಧಿ ದಿನಾಚರಣೆಯನ್ನಾಗಿ ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಆ ದಿನದಂದು ನೂತನ **ದೂರವಾಣಿ ಸಂಖ್ಯೆ:155260** ಅನ್ನು ಪರಿಚಯಿಸಲಾಗುತ್ತಿದ್ದು, ಅದರ ಮೂಲಕ ಸಾರ್ವಜನಿಕರು ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಡ್ರಗ್ಸ್ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ರಹಸ್ಯ ಮಾಹಿತಿಯನ್ನು ನೀಡಬಹುದಾಗಿದೆ.

ಅಲ್ಲದೆ ಸಾರ್ವಜನಿಕರಲ್ಲಿ ಡ್ರಗ್ಸ್ ಬಳಕೆಯ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಒಂದು ಕಿರುಚಿತ್ರವನ್ನು ಸಿದ್ದಪಡಿಸಲಾಗಿದ್ದು, ಅದನ್ನು ಈ ಮುಂದಿನ ಲಿಂಕ್‌ನಲ್ಲಿ https://youtu.be/aMNsoXjth64. ನೋಡಬಹುದು ಮೇಲೆ ತಿಳಿಸಲಾದ ದೂರವಾಣಿ ಸಂಖ್ಯೆ ಹಾಗೂ ಕಿರುಚಿತ್ರಗಳನ್ನು ಅಂತರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ವಿರೋಧಿ ದಿನಾಚರಣೆಯ ಅಂಗವಾಗಿ ಶಾಲಾ ಕಾಲೇಜುಗಳಲ್ಲಿ ಪ್ರಚುರಪಡಿಸಲು ಕ್ರಮ ವಹಿಸುವಂತೆ ಉಪನಿರ್ದೇಶಕರು ತಮ್ಮ ಹಂತದಲ್ಲಿ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದೆ.

Kudoramah

ನಿರ್ದೇಶಕರು(ಪ್ರೌಢ ಶಿಕ್ಷಣ)

ಗೌರವ ಪೂರ್ವಕವಾಗಿ ಪ್ರತಿಯನ್ನು:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರದ ಸಚಿವಾಲಯ, ಒಳಾಡಳಿತ ಇಲಾಖೆ, ಕೊಠಡಿ ಸಂ 222, ವಿಧಾನ ಸೌಧ, ಬೆಂಗಳೂರು-01 ರವರ ಮಾಹಿತಿಗಾಗಿ.
2. ಕಛೇರಿ ಪ್ರತಿ.

ಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಕಳುಹಿಸುತ್ತಾ ತಮ್ಮ ಹಂತದಲ್ಲಿ ಒಬ್ಬ ನೋಡೆಲ್ ಅಧಿಕಾರಿಯನ್ನು ನೇಮಿಸಿ ಈ ಮೇಲ್ಕಂಡ ಅಂಶಗಳನ್ನು ಅನುಷ್ಠಾನಗೊಳಿಸಲು ತಿಳಿಸಿದೆ.
2. ಕಛೇರಿ ಪ್ರತಿ.